ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ರಾಜ್ಯದ ಕೃಷಿ ವಿದ್ಯಾಲಯಗಳಿಗೆ ಏಕರೂಪ ನಿಯಮ ತರುವ ಕುರಿತು

ಶ್ರೀ ಎಂ.ಸಿ. ವೇಣುಗೋಪಾಲ್ (ವಿಧಾನಸಭೆಯಿಂದ ಚುನಾಯಿತರಾದವರು) -

169 (1324) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿರುವ ಎಲ್ಲಾ ಕೃಷಿ ವಿದ್ಯಾಲಯಗಳಲ್ಲಿ ಬೋಧಕ, ಬೋಧಕೇತರ, ಹಣಕಾಸಿನ ಸೌಕರ್ಯ ಮತ್ತು ಸೇವಾ ನಿಯಮಕ್ಕೆ ಏಕರೂಪ (Common Statutes) ಕಾಯಿದೆ ನಿಯಮವನ್ನು ತರಲು ವಿಳಂಬ ಮಾಡುತ್ತಿರುವುದಕ್ಕೆ ಕಾರಣವೇನು ;

(ಆ) ಈ ಕಾಯಿದೆಯನ್ನು ಜಾರಿಗೊಳಿಸಲು ಬೇಕಾಗಿರುವ ಸಮಯವೆಷ್ಟು ;

(ಇ) ಕೃಷಿ ಇಲಾಖೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ 6ನೇ ಪರಿಷ್ಕøತ ವೇತನವನ್ನು ಜಾರಿಗೊಳಿಸಲು ವಿಳಂಬ ಮಾಡಲು ಕಾರಣವೇನು ; ಮತ್ತು ಜಾರಿಯಾಗಲು ಬೇಕಾಗಿರುವ ಸಮಯವೆಷ್ಟು ?